ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಸ್ಥಾಪಿಸುವ ಕುರಿತು

ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

16 (273) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕರ್ನಾಟಕ ರಾಜ್ಯದಲ್ಲಿ ಹೊಸದಾಗಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರವು ಏನಾದರೂ ಕ್ರಮಗಳನ್ನು ಕೈಗೊಂಡಿದೆಯೇ ;

(ಆ) ಕ್ರಮ ಕೈಗೊಂಡಿದ್ದರೆ, ಇಲ್ಲಿಯವರೆಗೆ ಎಷ್ಟು ಪ್ರಾರಂಭವಾಗಿವೆ ಅಥವಾ ಪ್ರಾರಂಭವಾಗುವ ಹಂತದಲ್ಲಿವೆ ;

(ಇ) ನೂತನವಾಗಿ ಕಾರ್ಖಾನೆಗಳನ್ನು ಸ್ಥಾಪಿಸುವ ಸಲುವಾಗಿ ಎಷ್ಟು ಹೆಕ್ಟೇರ್ ಕೃಷಿ ಭೂಮಿಯನ್ನು ಕೃಷಿಯೇತರ ಚಟುವಟಿಕೆಯ ಉದ್ದೇಶಕ್ಕೆ ಭೂಪರಿವರ್ತಿಸಲಾಗಿದೆ ;

(ಈ) ಕೈಗಾರಿಕಾ ಉದ್ದೇಶಕ್ಕೆ ಭೂಪರಿವರ್ತನೆಗೆ ಕೋರಿ ಸಲ್ಲಿಕೆಯಾದ ಅರ್ಜಿಗಳನ್ನು ಏಕಗವಾಕ್ಷಿ ಅನುಮೋದನಾ ಸಮಿತಿಯ ಒಪ್ಪಿಗೆಗೆ ಹಲವಾರು ತೊಡಕುಗಳು ಎದುರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಸರ್ಕಾರ ಇದರ ಬಗ್ಗೆ ಕೈಗೊಂಡ ಕ್ರಮಗಳೇನು ?